# ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ

## HASSAN INSTITUTE OF MEDICAL SCIENCES, HASSAN

(An Autonomous Institute under the Dept of Medical Education, Government of Karnataka)

SRI CHAMARAJENDRA HOSPITAL CAMPUS, HASSAN-573201

Website: www.hims-hassan.org Phone/Fax No.08172-231699


ಸಂಖ್ಯೆ:ಎಸ್‌ಸಿಹೆಚ್/ಸಿ(3)/04/2014-15 ದಿನಾಂಕ: 14.11.2016.

## ಪ್ರಕಟಣೆ

**ವಿಷಯ** :- ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಬೆಂಗಳೂರು ಇಲ್ಲಿಂದ ಸಂಸ್ಥೆಗೆ ಆಯ್ಕೆಯಾಗಿರುವ 123 ಶುಶ್ರೂಷಕ ಅಭ್ಯರ್ಥಿಗಳ ನೇಮಕಾತಿ ಕುರಿತು.

**ಉಲ್ಲೇಖ** :- ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಬೆಂಗಳೂರು ಇವರ ಪತ್ರ ಸಂಖ್ಯೆ: ಇಡಿ/ಕೆಇಎ/ಆಡಳಿತ/45/14-15 ದಿನಾಂಕ: 24.10.2016.

*********

ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಬೆಂಗಳೂರು ಇವರು ದಿನಾಂಕ:24.10.2016 ರ ಪತ್ರದಲ್ಲಿ 123 ಶುಶ್ರೂಷಕ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಅಂತಿಮ ಆಯ್ಕೆ ಪಟ್ಟಿಯನ್ನು ಸಂಸ್ಥೆಗೆ ಕಳುಹಿಸಿರುತ್ತಾರೆ. ಈ ಪತ್ರದ ಮೇರೆಗೆ ಆಯ್ಕೆಯಾಗಿರುವ ಎಲ್ಲಾ ಅಭ್ಯರ್ಥಿಗಳ ನಡತೆ ಮತ್ತು ಪೂರ್ವ ಚಾರಿತ್ರ್ಯದ ಬಗ್ಗೆ ವರದಿ ಕೋರಿ ಸಂಬಂಧಪಟ್ಟ ಜಿಲ್ಲೆಗಳ ಪೋಲೀಸ್ ಅಧೀಕ್ಷಕರಿಗೆ ಪತ್ರ ಬರೆಯಲಾಗಿದೆ.

ಮೀಸಲಾತಿ ಅಡಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳ ಸಿಂಧುತ್ವ ಪ್ರಮಾಣ ಪತ್ರ, 371(ಜೆ) ಹೈದರಬಾದ್ ಕರ್ನಾಟಕ ಮೀಸಲಾತಿ ಅಡಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳ ಮತ್ತು ಯೋಜನಾ ನಿರಾಶ್ರಿತ ಮೀಸಲಾತಿ ಅಡಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳ ಪ್ರಮಾಣ ಪತ್ರ ಪರಿಶೀಲನೆ ಬಗ್ಗೆ ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆಯಲಾಗಿರುತ್ತದೆ.

ಕನ್ನಡ ಮಾಧ್ಯಮ ಮತ್ತು ಗ್ರಾಮೀಣ ಮೀಸಲಾತಿ ಅಡಿ ಆಯ್ಕೆಯಾಗಿರುವ ಅಭ್ಯರ್ಥಿಗಳ ಪ್ರಮಾಣ ಪತ್ರಗಳ ಪರಿಶೀಲನೆ ಮತ್ತು ವರದಿ ಕೋರಿ ಸಂಬಂಧಿಸಿದ ಜಿಲ್ಲೆಗಳ ಉಪ ನಿರ್ದೇಶಕರು ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಪತ್ರ ಬರೆಯಲಾಗಿದೆ.

ಅಂಗವಿಕಲತೆ ಮೀಸಲಾತಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳಲ್ಲಿ ಕಿವಿ ಮೂಗು ಮತ್ತು ಗಂಟಲು (ENT) ಅಡಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳು ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆ ಮಾನಸ ಗಂಗೋತ್ರಿ ಮೈಸೂರು ಇವರಿಂದ ಹಾಗೂ ಉಳಿದ ಅಭ್ಯರ್ಥಿಗಳು ವೈದ್ಯಕೀಯ ಮಂಡಳಿ ಜಿಲ್ಲಾಸ್ಪತ್ರೆ ಹಾಸನ ಇವರಿಂದ ಪರಿಶೀಲನೆಗೆ ಒಳಪಟ್ಟು ವೈದ್ಯಕೀಯ ಪ್ರಮಾಣ ಪತ್ರ ಪಡೆದು ಸಂಸ್ಥೆಗೆ ಸಲ್ಲಿಸುವುದು.ಈ ಮೀಸಲಾತಿ ಅಡಿ ಆಯ್ಕೆಯಾಗಿರುವ ಅಭ್ಯರ್ಥಿಗಳ ವಿವರಗಳನ್ನು ಮೇಲ್ಕಂಡ ಸಂಸ್ಥೆಗಳಿಗೆ ಕಳುಹಿಸಲಾಗಿದೆ.

ಸಾಮಾನ್ಯ ವರ್ಗದ ಮೀಸಲಾತಿ ಅಡಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳ ನಡತೆ ಬಗ್ಗೆ ಪೋಲೀಸ್ ವರದಿ ಬಂದ ನಂತರ ಉಳಿದಂತೆ ಮೇಲ್ಕಂಡ ಮೀಸಲಾತಿ ಅಡಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳ ಸಂಬಂಧಪಟ್ಟ ವರದಿಗಳು ಈ ಸಂಸ್ಥೆಗೆ ತಲುಪಿದ ನಂತರ ನೇಮಕಾತಿ ಆದೇಶ ಪತ್ರಗಳನ್ನು ನೊಂದಾಯಿತ ಅಂಚೆ ಮೂಲಕ ನೀಡಲಾಗಿರುವ ವಿಳಾಸಕ್ಕೆ ಅಭ್ಯರ್ಥಿಗಳಿಗೆ ಕಳುಹಿಸಿ ಕೊಡಲಾಗುವುದು.

ನೇಮಕಾತಿ ಹೊಂದಲು ಅರ್ಹರಾದ ಅಭ್ಯರ್ಥಿಗಳು ಕರ್ತವ್ಯಕ್ಕೆ ವರದಿ ಮಾಡಿಕೊಳ್ಳವಾಗ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಬೆಂಗಳೂರು ಇಲ್ಲಿಗೆ ಸಲ್ಲಿಸಿರುವ ಎಲ್ಲಾ ದಾಖಲಾತಿಗಳ ಮೂಲ ದಾಖಲಾತಿಗಳೊಂದಿಗೆ ಹಾಗೂ ದೃಢೀಕೃತ ಪ್ರತಿಗಳೊಂದಿಗೆ ಹಾಜರಾಗುವುದು ಎಂದು ಈ ಮೂಲಕ ತಿಳಿಯಪಡಿಸಿದೆ.

ನಿರ್ದೇಶಕರು,

ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ,ಹಾಸನ

ನಿರ್ದೇಶಕರು

ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ

ಹಾಸನ